ಶ್ರೀ ಎಚ್.ಕೆ. ಪಾಟೀಲ್ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು)

1) ಇಲ್ಲ.

2) ಬೇಸಿಗೆ ಕಾಲದಲ್ಲಿ ಪರಿಸ್ಥಿತಿಯನ್ನು ಪರಿಶೀಲಿಸಿ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು.

3) ಇಲ್ಲ.

ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ದಡ್ಡಿ-ನಾಗನೂರು ಏತ ನೀರಾವರಿ ಯೋಜನೆ:

4 (4) ಶ್ರೀ ಅಪ್ಪಯ್ಯಗೌಡ ಬಸಗೌಡ ಪಾಟೀಲ (ಸಂಕೇಶ್ವರ): ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1) ದಡ್ಡಿ-ನಾಗನೂರು ಏತ ನೀರಾವರಿ ಯೋಜನೆಗೆ ಸರ್ಕಾರದಿಂದ ಮಂಜೂರಾತಿ ನೀಡಿದ್ದರೂ ಸಹ ಇಲ್ಲಿಯವರೆಗೆ ಈ ಕಾಮಗಾರಿಯನ್ನು ಪ್ರಾರಂಭಿಸದಿರಲು ಕಾರಣಗಳೇನು;

2) ಈ ಯೋಜನೆಗೆ ಆಯವ್ಯಯದಲ್ಲಿ ಎಷ್ಟು ಹಣವನ್ನು ಒದಗಿಸಲಾಗಿದೆ;

3) ಈ ಯೋಜನೆ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಎಚ್.ಕೆ. ಪಾಟೀಲ್ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು)

1) ದಡ್ಡಿ-ನಾಗನೂರ ಏತ ನೀರಾವರಿ ಯೋಜನೆಗೆ 1994ರಲ್ಲಿ ಮಂಜೂರಾತಿ ದೊರಕಿರುತ್ತದೆ. 1995 ರಿಂದ ಈ ಕಾಮಗಾರಿಯು ಪ್ರಾರಂಭವಾಗಿದ್ದು, ಇಲ್ಲಿಯವರೆಗೆ ರೂ. 328.34 ಲಕ್ಷಗಳು ಖರ್ಚು ಮಾಡಲಾಗಿದೆ.

2) 2000-2001ನೇ ಸಾಲಿನಲ್ಲಿ ರೂ. 494 ಲಕ್ಷಗಳ ಅನುದಾನ ಒದಗಿಸಲಾಗಿದೆ.

3) ಈ ಯೋಜನೆಯ ಕಾಮಗಾರಿಗಳು 1995ರಲ್ಲಿ ಪ್ರಾರಂಭವಾಗಿದ್ದು ಸದರಿ ಕೆಲಸಗಳು ಈಗ ಪ್ರಗತಿಯಲ್ಲಿ ಇರುತ್ತದೆ. ಯೋಜನೆಯನ್ನು ಅಕ್ಟೋಬರ್ 2001ರ ವೇಳೆಗೆ ಕಾರ್ಯಗತಗೊಳಿಸಲು ಯೋಜಿಸಲಾಗಿದೆ.

ಹುಕ್ಕೇರಿ ತಾಲ್ಲೂಕಿನ ಕಮತನೂರು ಕೆರೆಯ ನಿರ್ಮಾಣ:

5 (5) ಶ್ರೀ ಅಪ್ಪಯ್ಯಗೌಡ ಬಸಗೌಡ ಪಾಟೀಲ (ಸಂಕೇಶ್ವರ): ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1) ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಕಮತನೂರು ಕೆರೆಯು ಒಡೆದು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

2) ಹಾಗಿದ್ದಲ್ಲಿ, ಈ ಪುನರ್ ನಿರ್ಮಾಣ ಕಾರ್ಯವನ್ನು ಯಾವಾಗ ಪೂರ್ಣಗೊಳಿಸಲಾಗುವುದು;